ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 12–10–2021

# ಮಾಧ್ಯಮ ಆಹ್ವಾನ
# Media Invitation

**1. ಸಶಸ್ತ್ರ ಪೊಲೀಸ್ ತರಬೇತಿ ಶಾಲೆಯ 7ನೇ ತಂಡದ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್‌ಗಳ, 33ನೇ ತಂಡದ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್‌ಗಳ ಮತ್ತು 3ನೇ ತಂಡದ ಕೆಎಸ್‌ಐಎಸ್‌ಎಫ್ ಪೊಲೀಸ್ ಕಾನ್ಸ್‌ಟೇಬಲ್‌ಗಳ ನಿರ್ಗಮನ ಪಥಸಂಚಲನ ಹಾಗೂ ನವೀಕರಣಗೊಂಡ ಸಭಾಂಗಣದ ಉದ್ಘಾಟನಾ ಕಾರ್ಯಕ್ರಮ:**

ಸಭಾಂಗಣದ ಉದ್ಘಾಟನೆ:
ಅರಗ ಜ್ಞಾನೇಂದ್ರ
ಮಾನ್ಯ ಗೃಹ ಸಚಿವರು, ಕರ್ನಾಟಕ ಸರ್ಕಾರ

ಉಪಸ್ಥಿತಿ:
ಪ್ರವೀಣ್ ಸೂದ್, ಭಾ.ಪೊ.ಸೇ.
ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.

ಪಿ.ಹರಿಶೇಖರನ್, ಭಾ.ಪೊ.ಸೇ.
ತರಬೇತಿ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ರಾಜ್ಯ, ಬೆಂಗಳೂರು.

ದಿನಾಂಕ: 13–10–2021 ಬುಧವಾರ, ಸಮಯ: ಬೆಳಿಗ್ಗೆ 8.30 ಗಂಟೆಗೆ

ಸ್ಥಳ: ತರಬೇತಿ ಶಾಲೆಯ ಕವಾಯತು ಮೈದಾನ, ಯಲಹಂಕ, ಬೆಂಗಳೂರು.

ವಿಶೇಷ ಸೂಚನೆ: ಕಾರ್ಯಕ್ರಮಕ್ಕೆ ವಾಹನದ ವ್ಯವಸ್ಥೆ ಕಲ್ಪಿಸಲಾಗಿದ್ದು, ವಾಹನವು ಕಬ್ಬನ್ ಪಾರ್ಕ್‌ನ ಪ್ರೆಸ್ ಕ್ಲಬ್ ಆವರಣದಿಂದ ಬೆಳಿಗ್ಗೆ 7.00 ಗಂಟೆಗೆ ಹೊರಡಲಿದೆ.
ಹೆಚ್ಚಿನ ಮಾಹಿತಿಗಾಗಿ : ಸಿದ್ದೇಶ್, ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ – ದೂರವಾಣಿ ಸಂ. 94812 53869 ಅಥವಾ ಗಂಗಾಧರ, ಪೊಲೀಸ್ ಪೇದೆ – ದೂರವಾಣಿ ಸಂ. 97404 57296 ಸಂಪರ್ಕಿಸುವುದು

**2. ರಾಷ್ಟ್ರೀಯ ಶಿಕ್ಷಣ ನೀತಿ–2020 ನ್ನು ಅನುಷ್ಠಾನಗೊಳಿಸುವ ಸಂಬಂಧ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದಲ್ಲಿ ಒಂದು ದಿನದ ಕಾರ್ಯಾಗಾರ:**

**ಉದ್ಘಾಟನೆ:**
**ಪಿ.ಪ್ರದೀಪ್. ಐ.ಎ.ಎಸ್.**
**ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

**ಅಧ್ಯಕ್ಷತೆ:**
**ಪ್ರೊ. ಎಲ್. ಗೋಮತಿ ದೇವಿ**
**ಕುಲಪತಿಗಳು, ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ**

**ದಿನಾಂಕ: 13–10–2021 ಬುಧವಾರ, ಸಮಯ: ಬೆಳಿಗ್ಗೆ 11.30 ಗಂಟೆಗೆ**

**ಸ್ಥಳ: ಕೊಂಡಜ್ಜಿ ಬಸಪ್ಪ ಸಭಾಂಗಣ, ಅರಮನೆ ರಸ್ತೆ, ಬೆಂಗಳೂರು.**

# ಪತ್ರಿಕಾ ಪ್ರಕಟಣೆ

**PRESS RELEASE**

## ರಾಷ್ಟ್ರೀಯ ಶಿಕ್ಷಣ ನೀತಿ 2020ನ್ನು ಅನುಷ್ಠಾನಗೊಳಿಸಲು ಒಂದು ದಿನದ ಕಾರ್ಯಾಗಾರ

ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ):

ರಾಷ್ಟ್ರೀಯ ಶಿಕ್ಷಣ ನೀತಿ–2020 ನ್ನು ಅನುಷ್ಠಾನಗೊಳಿಸುವ ಸಂಬಂಧ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯವು ಒಂದು ದಿನದ ಕಾರ್ಯಾಗಾರವನ್ನು ಅಕ್ಟೋಬರ್ 13 ರಂದು ಬೆಳಿಗ್ಗೆ 11.30 ಗಂಟೆಗೆ ನಗರದ ಅರಮನೆ ರಸ್ತೆಯ ಕೊಂಡಜ್ಜಿ ಬಸಪ್ಪ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಕರ್ನಾಟಕ ಸರ್ಕಾರದ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಆಯುಕ್ತರಾದ ಪಿ.ಪ್ರದೀಪ್, ಐ.ಎ.ಎಸ್ ಅವರು ಕಾರ್ಯಾಗಾರದ ಉದ್ಘಾಟನೆ ಮಾಡಲಿದ್ದಾರೆ. ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎಲ್. ಗೋಮತಿ ದೇವಿಯವರು ಕಾರ್ಯಾಗಾರದ ಅಧ್ಯಕ್ಷತೆ ವಹಿಸುವರು.

ರಾಷ್ಟ್ರೀಯ ಶಿಕ್ಷಣ ನೀತಿ ಕರಡು ತಯಾರಕ ಸಮಿತಿಯ ಸದಸ್ಯರು ಹಾಗೂ ಆಂಧ್ರ ಪ್ರದೇಶದ ಕೇಂದ್ರ ಬುಡಕಟ್ಟು ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ತೇಜಸ್ವಿ ಕಟ್ಟಿಮನಿ ಅವರು ಕಾರ್ಯಾಗಾರದ ಪೂರ್ವಾಹ್ನದಲ್ಲಿ ವಿಶ್ವವಿದ್ಯಾಲಯ ಮಟ್ಟದಲ್ಲಿ ಬೋಧಕ ವರ್ಗ, ಆಡಳಿತ ವರ್ಗ ಮತ್ತು ವಿದ್ಯಾರ್ಥಿಗಳಿಗೆ ಹೊಸ ಶಿಕ್ಷಣ ನೀತಿಯ ಅನುಷ್ಠಾನದಿಂದ ಆಗಬಹುದಾದ ಶೈಕ್ಷಣಿಕ ಉನ್ನತಿಯ ಬಗ್ಗೆ ತಿಳಿಸಲಿದ್ದಾರೆ.

ತುಮಕೂರು ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ವೈ. ಎಸ್. ಸಿದ್ದೇಗೌಡ ಅವರು ಅಪರಾಹ್ನದಲ್ಲಿ ಶಿಕ್ಷಣ ನೀತಿಯ ಅನುಷ್ಠಾನವನ್ನು ಸುಗಮಗೊಳಿಸುವ ಬಗ್ಗೆ ಪ್ರವಚನ ನೀಡಲಿದ್ದಾರೆ. ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ.ಹೆಚ್. ರಾಮಕೃಷ್ಣಯ್ಯ ಅವರು ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದಲ್ಲಿ ನೂತನ ಶಿಕ್ಷಣ ನೀತಿಯ ಜಾರಿಗೊಳಿಸುವಿಕೆಯ ಅನೇಕ ಮಜಲುಗಳ ಬಗ್ಗೆ ಕಿರು–ಭಾಷಣವನ್ನು ನೀಡಲಿದ್ದಾರೆ.

# 6ನೇ ವೇತನ ಆಯೋಗ, ಆರೋಗ್ಯ ವಿಮೆ ಜಾರಿಗೆ ಕ್ರಮ:ಶಶಿಕಲಾ ಜೊಲ್ಲೆ

ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ):

ಇಲಾಖೆ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅರ್ಚಕರಿಗೆ ವಿಮಾ ಯೋಜನೆ ಹಾಗೂ ನೌಕರರಿಗೆ 6 ನೇ ವೇತನ ಆಯೋಗದ ಶಿಫಾರಸ್ಸಿನಂತೆ ವೇತನ ಜಾರಿಗೆ ಆದೇಶ ಹೊರಡಿಸಲಾಗಿದೆ ಎಂದು ಮುಜರಾಯಿ ಹಜ್ ಮತ್ತು ವಕ್ಪ್ ಸಚಿವರಾದ ಶಶಿಕಲಾ ಜೊಲ್ಲೆಯವರು ತಿಳಿಸಿದ್ದಾರೆ.

ಮಂಗಳವಾರ ವಿಕಾಸಸೌಧದಲ್ಲಿ ಮುಜರಾಯಿ ಇಲಾಖೆಯಲ್ಲಿ ಜಾರಿಗೆ ತಂದ ಹೊಸ ಯೋಜನೆಗಳ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ದೇವಸ್ಥಾನಗಳಲ್ಲಿ ಪೂಜೆಸಲ್ಲಿಸುವ ಅರ್ಚಕರು ಹಾಗೂ ದೇವಾಲಯ ನೌಕರರು ಆರೋಗ್ಯ ಸಮಸ್ಯೆಗೆ ಒಳಗಾದರೆ ಅವರಿಗೆ ರಕ್ಷಣೆ ಒದಗಿಸಲು ನಾನು ಇಲಾಖೆಯ ಜವಾಬ್ದಾರಿ ತೆಗೆದುಕೊಂಡ ಮೇಲೆ ಅವರದ ರಕ್ಷಣೆಗೆ ವಿನೂತನ ವಿಮೆ ಯೋಜನೆ ಜಾರಿಗೊಳಿಸಿದ್ದು, ಅರ್ಚಕರು ಹಾಗೂ ಇಲಾಖೆ ನೌಕರರಿಗೆ ವಿಮೆ ಜಾರಿಗೆ ತರಲು ತೀರ್ಮಾನಿಸಲಾಗಿದೆ. ಇದರಿಂದ ಮುಜರಾಯಿ ಇಲಾಖೆಯ ಸುಮಾರು 37,000 ಸಿಬ್ಬಂದಿಗೆ ಪ್ರಯೋಜನವಾಗಲಿದೆ ಎಂದು ಸಚಿವರು ಹೇಳಿದರು.

ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಗೆ ಒಳಪಡುವ ಧಾರ್ಮಿಕ ಸಂಸ್ಥೆಗಳಲ್ಲಿ ಈಗಾಗಲೇ 5ನೇವೇತನ ಆಯೋಗದ ಶಿಫಾರಸ್ಸಿನಂತೆ ವೇತನ ಪಡೆದು ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ಹಾಗೂ ಅರ್ಚಕರಿಗೆ 6ನೇವೇತನ ಆಯೋಗದ ವೇತನ ದೊರಕಿಸಿಕೊಡುವಂತೆ ಅರ್ಚಕರಿಂದ ಬಹಳ ದಿನಗಳಿಂದ ಬೇಡಿಕೆ ಇತ್ತು. ಈ ಬಗ್ಗೆ ಮುಖ್ಯಮಂತ್ರಿಗಳ ಜೊತೆ ಚರ್ಚಿಸಿ ತ್ವರಿತಗತಿಯಲ್ಲಿ ಅರ್ಚರಿಕರಿಗೆ 6ನೇ ವೇತನ ಆಯೋಗದ ವೇತನ ನೀಡಲು ತೀರ್ಮಾನಿಸಲಾಗಿದೆ. ಕೆಲವು ಷರತ್ತುಗಳನ್ನು ವಿಧಿಸಿ, ದೇವಾಲಯದ ವಾರ್ಷಿಕ ಆದಾಯದಲ್ಲಿ ನೌಕರರ ವೇತನ ಶೇ 35%ರಷ್ಟು ಮೀರದಂತೆ ನೌಕರರನ್ನು 6ನೇ ವೇತನ ಆಯೋಗದ ವ್ಯಾಪ್ತಿಗೆ ಒಳಪಡುವಂತೆ ಕ್ರಮ ಕೈಗೊಳ್ಳಲಾಗುತ್ತದೆ. ಇದರಿಂದ ಮುಜರಾಯಿ ಇಲಾಖೆಯ ಸುಮಾರು 1034 ಸಿಬ್ಬಂದಿಗೆ ಪ್ರಯೋಜನವಾಗಲಿದೆ. ಇದಕ್ಕೆ 20 ಕೋಟಿ ರೂ. ವೆಚ್ಚವಾಗಲಿದ್ದು, ಆಯಾ ದೇವಸ್ಥಾನಗಳ ನಿಧಿಯಿಂದ ಒದಗಿಸಲಾಗುವುದು. ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆಯಾಗುವುದಿಲ್ಲ ಎಂದು ತಿಳಿಸಿದರು.

"ಸಿ" ದರ್ಜೆಯ ದೇವಸ್ಥಾನಗಳ ಅರ್ಚಕರಿಗೆ 6 ವೇತನ ಆಯೋಗದ ಶಿಫಾರಸ್ಸಿನ ಪ್ರಕಾರ ವೇತನ ನೀಡುಲಾಗುತ್ತದೆಯೇ ಎಂದು ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, "ಸಿ" ದರ್ಜೆಯ ಬಹುತೇಕ ದೇವಸ್ಥಾನಗಳಲ್ಲಿ ಖಾಯಂ ಅರ್ಚಕರು ಇರುವುದಿಲ್ಲ. ಈ ಬಗ್ಗೆ ಎಲ್ಲ ದೇವಸ್ಥಾಗಳಿಂದ ಮಾಹಿತಿ ಪಡೆದು ಮುಂದಿನ ಕ್ರಮ ಕೈಗೊಳ್ಳಲಾಗುವುದು. ಎಲ್ಲ ದೇವಸ್ಥಾನಗಳಿಗೆ ತಸ್ತಿಕ ಹಣ 19.ಕೋಟಿ ರೂ. ಬಾಕಿ ಇದ್ದು ಶೀಘ್ರವೇ ಹಣ ಬಿಡುಗಡೆ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

ಇನ್ನು ಮುಜರಾಯಿಇಲಾಖೆ ವ್ಯಾಪ್ತಿಗೆ ಒಳಪಡುವ ರಾಜ್ಯದ ಎಲ್ಲ ದೇವಸ್ಥಾನಗಳ ಆಸ್ತಿ ಮಾರ್ಗ ನಕ್ಷೆ, ಅಲ್ಲಿನ ಸೇವೆಗಳ ಸಂಪೂರ್ಣ ಮಾಹಿತಿಯನ್ನು ಆನ್‌ಲೈನ್ ಮೂಲಕ ತಿಳಿದುಕೊಳ್ಳುವಂತೆ ಐಟಿಎಂಎಸ್ (ಇಂಟಿಗ್ರೇಟೆಡ್ ಡೆವೆಲಪ್ ಮೆಂಟ್ ಮ್ಯಾನೇಜ್ ಮೆಂಟ್ ಸಿಸ್ಟಮ್) ಜಾರಿಗೆ ತೀರ್ಮಾನಿಸಲಾಗಿದೆ ಎಂದು ಸಚಿವರು ತಿಳಿಸಿದರು. ಇದೊಂದು ವಿನೂತನ ಯೋಜನೆಯಾಗಿದ್ದು, ರಾಜ್ಯದಲ್ಲಿ ಇದನ್ನು ಮೊದಲ ಬಾರಿಗೆ ಜಾರಿಗೆ ತರಲಾಗುತ್ತಿದೆ. ಇದರಿಂದ ರಾಜ್ಯದ ದೇವಾಲಯಗಳ ಮಾಹಿತಿ ಒಂದೆಡೆ ದೊರೆಯುವುದರಿಂದ ದೇಶ-ವಿದೇಶಗಳಿಂದ ಬರುವ ಭಕ್ತಾಧಿಗಳಿಗೆ ಅನುಕೂಲವಾಗಲಿದೆ. ದೇವಾಲಯಗಳ ಆದಾಯ ವೃದ್ಧಿಗೂ ಇದು ಪೂರಕವಾಗಲಿದೆ ಎಂದು ವಿವರಿಸಿದರು.

ವಿಶ್ವದಲ್ಲಿ ಕೊರೊನಾ ಎರಡು ಅಲೆಗಳಿಂದ ಸಾಕಷ್ಟು ಜನರ ಜೀವ ಹಾನಿಯಾಗಿದೆ. ಈಗ ಮೂರನೆ ಅಲೆ ಮಕ್ಕಳ ಆರೋಗ್ಯದ ಮೇಲೆ ಪರಿಣಾಮ ಬೀರಲಿದೆ ಎಂದು ತಜ್ಞರು ಅಭಿಪ್ರಾಯ ಪಟ್ಟಿದ್ದಾರೆ. ನಾವು ನಮ್ಮ ಇಲಾಖೆ ವ್ಯಾಪ್ತಿಯಲ್ಲಿ ಬರುವ ಎಲ್ಲ ವರ್ಗದ ದೇವಸ್ಥಾನಗಳಲ್ಲಿ ವಿಜಯದಶಮಿ ಹಬ್ಬದ ಪ್ರಯುಕ್ತ ಅಕ್ಟೋಬರ್ 15 ರಂದು ಎಲ್ಲ ಜನರು ಹಾಗೂ ಮಕ್ಕಳ ಆರೋಗ್ಯ ರಕ್ಷಣೆಗಾಗಿ ಪ್ರಾರ್ಥಿಸಲು ವಿಶೇಷ ಪೂಜೆ ಸಲ್ಲಿಸಲು ಎಲ್ಲ ದೇವಸ್ಥಾನಗಳಿಗೆ ಸುತ್ತೋಲೆ ಹೊರಡಿಸಲಾಗಿದೆ.

ಹಿಂದು ಧರ್ಮ ಶಾಸ್ತ್ರ ಪುರಾಣದಲ್ಲಿ ವಿಜಯದಶಮಿಯನ್ನು ವಿಶೇಷ ದಿನವೆಂದು ಪರಿಗಣಿಸಲಾಗುತ್ತದೆ. ಇದು ದುಷ್ಟ ಶಕ್ತಿಯನ್ನು ಸಂಹರಿಸಿ ವಿಜಯವನ್ನು ಆಚರಿಸುವ ದಿನ. ಆದ್ದರಿಂದ ಈ ದಿನ ಶ್ರೀ ಭಗವತಿ ಮತ್ತು ಭಗವಂತನನ್ನು ವಿಶೇಷವಾಗಿ ಪ್ರಾರ್ಥಿಸಿ ಪೂಜಿಸಿದರೆ. ವಿಶೇಷ ಫಲ ಹೊಂದ ಬಹುದೆಂದು ಶಾಸ್ತ್ರ ವಿಧಿತವಾಗಿದೆ. ಅಲ್ಲದೇ ಭಕ್ತರ ನಂಬಿಕೆಯೂ ಆಗಿರುವುದರಿಂದ ಪ್ರಾಕೃತಿಕವಾಗಿ ಯಾರಿಗೂ ದಷ್ಪರಿಣಾಮ ಆಗದಂತೆ ವಿಜಯ ದಶಮಿಯ ದಿನ ಅಕ್ಟೋಬರ 15 ರಂದು ಎಲ್ಲ ಮುಜರಾಯಿ ದೇವಸ್ಥಾನಗಳಲ್ಲಿ ಕೊರೊನಾ ಸಂಕಟ ದೂರ ಮಾಡಿ ಜನತೆಯ ಆರೋಗ್ಯ ಕಾಯುವಂತೆ ವಿಶೇಷ ಪೂಜೆ ನೆರವೇರಿಸಲು ಸೂಚಿಸಲಾಗಿದೆ ಎಂದು ತಿಳಿಸಿದರು.

ಇದೇ ವೇಳೆ ಮುಜರಾಯಿ ಇಲಾಖೆ ವ್ಯಾಪ್ತಿಯ ದೇವಸ್ಥಾನಗಳ ಪ್ರವೇಶಕ್ಕೆ ಡ್ರೆಸ್ ಕೋಡ್ ಮಾಡುವ ಬಗ್ಗೆ ನನ್ನ ಮುಂದೆ ಯಾವುದೆ ಪ್ರಸ್ತಾಪ ಬಂದಿಲ್ಲ. ಧಾರ್ಮಿಕ ಪರಿಷತ್ ನಲ್ಲಿ ಚರ್ಚೆಯಾಗಿದ್ದರೆ ಮಾಹಿತಿ ಪಡೆದು ಪರಿಶೀಲನೆ ಮಾಡಲಾಗುವುದು.ಚಿಕ್ಕಮಗಳೂರಿನ ಬಾಬಾ ಬುಡನ್ ಗಿರಿ ದತ್ತ ಪೀಠದಲ್ಲಿ ಮುಜಾವರ ಅವರನ್ನು ನೇಮಕ ಮಾಡಿದ್ದನ್ನು ರದ್ದು ಪಡಿಸಿರುವ ಹೈಕೋರ್ಟ್ ಆದೇಶದ ಬಗ್ಗೆ ಸಂಪುಟ ಉಪ ಸಮಿತಿಯಲ್ಲಿ ಚರ್ಚೆಯಾಗಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕಂದಾಯ ಹಾಗೂ ಮುಜರಾಯಿ ಇಲಾಖೆ ಪ್ರಧಾನ ಕಾರ್ಯದರ್ಶಿ ತುಷಾರ್ ಗಿರಿನಾಥ, ಮುಜರಾಯಿ ಇಲಾಖೆಯ ಆಯುಕ್ತರಾದ ರೋಹಿಣಿ ಸಿಂಧೂರಿ ಉಪಸ್ಥಿತರಿದ್ದರು.

## ಕರ್ನಾಟಕ ವಿಧಾನಸಭೆ ಉಪಚುನಾವಣೆ

## ಮತದಾನ ದಿನ ಮತ ಚಲಾಯಿಸಲು ಕಾರ್ಮಿಕರಿಗೆ ವೇತನ ಸಹಿತ ರಜೆ

ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ):

ರಾಜ್ಯ ಚುನಾವಣಾ ಆಯೋಗವು ರಾಜ್ಯದಲ್ಲಿನ 33-ಸಿಂಧಗಿ ಹಾಗೂ 82- ಹಾನಗಲ್ ಮತ ಕ್ಷೇತ್ರಗಳಿಗೆ ಉಪಚುನಾವಣೆ ನಡೆಸಲು ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿ ಚುನಾವಣೆ ನಡೆಯುವ ಈ ಎರಡು ವಿಧಾನಸಭಾ ಕ್ಷೇತ್ರಗಳಿಗೆ ಅಕ್ಟೋಬರ್ 30 ಶನಿವಾರದಂದು ಮತದಾನ ನಡೆಸಲು ಘೋಷಿಸಿರುವುದರಿಂದ ಮತ ಕ್ಷೇತ್ರಗಳ ಮತದಾನ ಮಾಡಲು ಅನುಕೂಲವಾಗುವಂತೆ ವೇತನ ಸಹಿತ ರಜೆಯನ್ನಾಗಿ ಘೋಷಿಸಲು ಸೂಕ್ತ ಆದೇಶ ಹೊರಡಿಸುವಂತೆ ಉಲ್ಲೇಖ-2 ರ ಪತ್ರದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ಕೋರಿರುತ್ತಾರೆ.

ಉಪ ಚುನಾವಣೆ ನಡೆಯುವ ಕ್ಷೇತ್ರಗಳಲ್ಲಿ ಮತದಾರರಿಗೆ ಮತದಾನ ಮಾಡಲು ಅನುಕೂಲವಾಗುವಂತೆ ಸಂಬಂಧಪಟ್ಟ ಕಾರ್ಯ ವ್ಯಾಪ್ತಿಯಲ್ಲಿ ಬರುವ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳನ್ನು ಒಳಪಟ್ಟಂತೆ ರಾಷ್ಟ್ರೀಯ ಹಬ್ಬ ಮತ್ತು ರಜಾ ದಿನಗಳ ಕಾಯ್ದೆ, 1963 ರ ಕಲಂ 3(ಎ) ರನ್ವಯ ಮತದಾನ ನಡೆಯಲಿರುವ ಕ್ಷೇತ್ರಗಳಲ್ಲಿ ಅರ್ಹರಿರುವ ಎಲ್ಲಾ ಕಾರ್ಮಿಕ ಮತದಾರರಿಗೆ ದಿನಾಂಕ: 30-10-2021 ಶನಿವಾರದಂದು ವೇತನ ಸಹಿತ ರಜೆ ನೀಡಿ, ಎಲ್ಲಾ ಅರ್ಹ ಕಾರ್ಮಿಕರು ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸಲು ಅನುವು ಮಾಡಿಕೊಟ್ಟು ಕಾಯ್ದೆ ಹಾಗೂ ಚುನಾವಣಾ ಆಯೋಗದ ಆದೇಶವನ್ನು ನಿಯಮಾನುಸಾರ ಪಾಲಿಸಬೇಕಾಗಿರುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಮಾಹಿತಿ ಕಣಜ ತಂತ್ರಾಂಶ

ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ):

ಮಾಹಿತಿ ಕಣಜ ಪೋರ್ಟಲ್ ಸಾರ್ವಜನಿಕ ಮಾಹಿತಿ ವ್ಯವಸ್ಥೆಯಾಗಿದ್ದು, ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 4 (2) ರಡಿಯಲ್ಲಿ ನಾಗರಿಕರಿಗೆ ನಿರ್ದಿಷ್ಟವಾದ ಮಾಹಿತಿಯನ್ನು ಒದಗಿಸುವ ಏಕಗವಾಕ್ಷಿ ಮತ್ತು ಏಕೀಕೃತ ಪೋರ್ಟಲ್ ಆಗಿದೆ. ಎಂದು ಅಪರ ಮುಖ್ಯ ಕಾರ್ಯದರ್ಶಿ (ಇ-ಆಡಳಿತ) ರಾಜೀವ್ ಚಾವ್ಲಾ ಅವರು ತಿಳಿಸಿದರು.

ಇಂದು ಬಹುಮಹಡಿ ಕಟ್ಟಡದ ಇ-ಆಡಳಿತ ಕೇಂದ್ರದ ಸಮ್ಮೇಳಣ ಸಭಾಂಗಣದಲ್ಲಿ ಮಾಧ್ಯಮದವರೊಂದಿಗೆ ಮಾಹಿತಿಯನ್ನು ನೀಡಿದ ಅವರು, ಈ ಪೋರ್ಟಲ್‌ನ್ನು ಬಳಸಲು ನಾಗರಿಕರು ಯಾವುದೇ ಬಳಕೆದಾರ ಹೆಸರು ಅಥವಾ ಪಾಸ್‌ವರ್ಡ್ ಬಳಸಬೇಕಾಗಿರುವುದಿಲ್ಲ ಹಾಗೂ ಮಾಹಿತಿ ಕಣಜ ಪೋರ್ಟಲ್ ಮೂಲಕ ವ್ಯಾಪಕ ಶ್ರೇಣಿಯ ಮಾಹಿತಿಗಳನ್ನು ಪಡಯಬಹುದಾಗಿರುತ್ತದೆ. ಮಾಹಿತಿ ಕಣಜ ತಂತ್ರಾಂಶವನ್ನು ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವೂ ಸ್ವಯಂಪ್ರೇರಿತವಾಗಿ ಸಾರ್ವಜನಿಕರಿಗೆ ಆದಷ್ಟೂ ಹೆಚ್ಚು ಮಾಹಿತಿಗಳನ್ನು ನಿಯಮಿತವಾಗಿ ಅಂತರಜಾಲ ಸೇರಿದಂತೆ ವಿವಿಧ ಸಂವಹನದ ವಿಧಾನಗಳನ್ನು ಅನುಸರಿಸಿ ನೀಡಲು ನಿರಂತರವಾಗಿ ಯತ್ನಿಸಬೇಕು. ಇದರಿಂದಾಗಿ ಸಾರ್ವಜನಿಕರು ಕನಿಷ್ಠ ಪ್ರಮಾಣದಲ್ಲಿ ಮಾಹಿತಿಗಳನ್ನು ಪಡೆಯಬಹುದಾಗಿದೆ ಎಂದು ತಿಳಿಸಿದರು.

ಈ ಪೋರ್ಟಲ್‌ನಲ್ಲಿ ಅಟಲ್ ಜನಸ್ನೇಹಿ ಕೇಂದ್ರಗಳ ಮಾಹಿತಿ, ಪಡಿತರ ಮಾರಾಟಗಾರರ ಸಂಪರ್ಕ ವಿವರಗಳು, ಎನ್‌ಎಫ್‌ಎಸ್‌ಎ ಅಡಿಯಲ್ಲಿ ಇರುವ ಫಲಾನುಭವಿಗಳು ಪಟ್ಟಿ, ಪಿಂಚಣಿ ಫಲಾನುಭವಿಗಳ ವಿವರಗಳು, ವಿದ್ಯಾರ್ಥಿವೇತನದ ವಿವರಗಳು, ಸಾಲ ಮನ್ನಾ ಯೋಜನೆಗಳು, ಪರಿಹಾರ ಯೋಜನೆ, ಪಂಚಾಯತ್‌ನ ಜನಪ್ರತಿನಿಧಿಗಳ ಮಾಹಿತಿ, ಪಂಚಾಯತ್ / ವಾರ್ಡ್ ಕೆಳಗೆ ಕೈಗೊಂಡ ಕಾಂಗಾರಿಗಳು, ಸರ್ಕಾರ ಮತ್ತು ಸರ್ಕಾರಿ ಅನುದಾನಿತ ಶಾಲೆಗಳ ವಿವರಗಳು ಹೀಗೆ ಹಲವು ಮಾಹಿತಿಗಳನ್ನು ಒಳಗೊಂಡಿದ್ದು, ಯಾವುದೇ ಮಾಹಿತಿ ಬೇಕಾದರೂ ಈ ಮಾಹಿತಿ ಕಣಜ ಪೋರ್ಟಲ್‌ನ ಲಭ್ಯವಾಗುವುದು.

ಮಾಹಿತಿ ಕಣಜ ಪೋರ್ಟಲ್‌ನಿಂದ ನಾಗರಿಕರಿಗೆ ಉಪಯುಕ್ತವಾಗುವ ಪ್ರಮುಖ ಅಂಶಗಳು:

ನಾಗರಿಕರು ಮಾಹಿತಿಯನ್ನು ಅವರ ಬೆರಳಿನಂಚಿನಲ್ಲೇ ಮಾಹಿತಿಯನ್ನು ಪಡೆಯಬಹುದು, ಯಾವುದೇ ಆರ್.ಟಿ.ಇ ಪ್ರಶ್ನೆಯನ್ನು ಭರ್ತಿ ಮಾಡದೆ ನಾಗರಿಕರು ಮಾಹಿತಿಯನ್ನು ಪಡೆಯಬಹುದು. ಬಳಕೆದಾರರಿಗೆ ಯಾವುದೇ ಲಾಗ್‌ಇನ್ ಐಡಿ ಅಥವಾ ಪಾಸ್‌ವರ್ಡ್ ಬಳಸಬೇಕಾಗಿರುವುದಿಲ್ಲ. ಇಲ್ಲಿಯವರೆಗೆ ಮಾಹಿತಿ ಕಣಜ ಪೋರ್ಟಲ್‌ನಲ್ಲಿ 50 ಇಲಾಖೆಗಳು ಅನ್‌ಬೋರ್ಡ್ ಆಗಿದ್ದು, ಈಗಾಗಲೇ 167 ಸೇವೆಗಳನ್ನು ನಾಗರಿಕರಿಗೆ ಲಭ್ಯಗೊಳಿಸಲಾಗಿದೆ. ಅನ್‌ಬೋರ್ಡ್ ಆದ ಇಲಾಖೆಗಳ ಹಾಗೂ ಸೇವೆಗಳ ಪಟ್ಟಿಯನ್ನು ಈ ಕಡತದೊಂದಿಗೆ ತಮ್ಮ ಮಾಹಿತಿಗಾಗಿ ಲಗತ್ತಿಸಲಾಗಿದೆ.

ಮಾಹಿತಿ ಕಣಜ ಪೋರ್ಟಲ್ ಬಳಕೆದಾರರಿಗೆ, ಆರೋಗ್ಯಕರ ಮತ್ತು ಮಾಹಿತಿಪೂರ್ಣ ಪ್ರಜಾಪ್ರಭುತ್ವವನ್ನು ನಿರ್ಮಿಸಲು ಆಹ್ವಾನಿಸುತ್ತದೆ. ಹೆಚ್ಚಿನ ಮಾಹಿತಿಗಾಗಿ, ಸಹಾಯವಾಣಿಯ ದೂರವಾಣಿ ಸಂಖ್ಯೆ: 080–22258338, ಹಾಗೂ ಇ–ಮೇಲ್ mk.helpline@karnataka.gov.in ನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದರು.

## ಸಾರಿಗೆ ನಿಗಮದಲ್ಲಿ ಹುದ್ದೆ ಕೊಡುವ ಆಮಿಷವೊಡ್ಡಿದಲ್ಲಿ ದೂರಿಗೆ ಅವಕಾಶ

ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ):

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಸಹಾಯಕ ಸಂಚಾರ ನಿರೀಕ್ಷಕ, ಸಂಚಾರ ನಿರೀಕ್ಷಕ ಮತ್ತು ಭದ್ರತಾ ಅಧಿಕಾರಿ ಹುದ್ದೆಗಳನ್ನು ಕೊಡಿಸುವುದಾಗಿ ಹಲವು ಅಭ್ಯರ್ಥಿಗಳಿಂದ ಸಂಬಂಧಪಡದ ವ್ಯಕ್ತಿಗಳು ಹಣ ಪಡೆದಿರುವ ಬಗ್ಗೆ ನಿಗಮದ ಗಮನಕ್ಕೆ ಬಂದಿರುತ್ತದೆ. ನಿಗಮದಲ್ಲಿ ಸಹಾಯಕ ಸಂಚಾರ ನಿರೀಕ್ಷಕ, ಸಂಚಾರ ನಿರೀಕ್ಷಕ ಮತ್ತು ಭದ್ರತಾ ಅಧಿಕಾರಿ ಹುದ್ದೆಗಳಿಗೆ ಯಾವುದೇ ತರಹದ ಜಾಹೀರಾತು ಹೊರಡಿಸಿರುವುದಿಲ್ಲ ಹಾಗೂ ನೇಮಕಾತಿ ಪ್ರಕ್ರಿಯೆ ಸಹ ನಡೆಯುತ್ತಿರುವುದಿಲ್ಲ.

ನಿಗಮದಲ್ಲಿ ನಡೆಯುವಂತಹ ಎಲ್ಲಾ ನೇಮಕಾತಿಗಳಿಗೆ ಸಂಬಂಧಿಸಿದಂತೆ ಜಾಹೀರಾತುಗಳನ್ನು ಪ್ರಮುಖ ದಿನಪತ್ರಿಕೆಗಳಲ್ಲಿ ಹಾಗೂ ನಿಗಮದ ಅಧಿಕೃತ ವೆಬ್‌ಸೈಟ್ WWW.Ksrtcjobs.com ನಲ್ಲಿ ಪ್ರಕಟಿಸುವ ಪದ್ಧತಿ ಇರುತ್ತದೆ ಹಾಗೂ ಎಲ್ಲಾ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಅಂತರ್‌ಜಾಲದ ಮುಖಾಂತರ ಸ್ವೀಕರಿಸಿ ಸಂಸ್ಥೆಯಲ್ಲಿ ಚಾಲ್ತಿಯಲ್ಲಿರುವ ಪದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ವಯ ಪಾರದರ್ಶಕವಾಗಿ ಆಯ್ಕೆ ಮಾಡಲಾಗುತ್ತದೆ.

ನಿಗಮದಲ್ಲಿ ಆಯ್ಕೆ ಮಾಡುವ ಎಲ್ಲಾ ಹುದ್ದೆಗಳ ನೇಮಕಾತಿಯಲ್ಲಿ ಯಾವುದೇ ತರಹದ ಅಕ್ರಮ / ಅವ್ಯವಹಾರಗಳಿಗೆ ಅವಕಾಶ ಇರುವುದಿಲ್ಲ. ಯಾರಾದರೂ ನಿಗಮದಲ್ಲಿ ಯಾವುದೇ ಹುದ್ದೆಯನ್ನು ಕೊಡಿಸುವುದಾಗಿ ಆಮಿಷವೊಡ್ಡಿದಲ್ಲಿ, ಕೂಡಲೇ ಕೇಂದ್ರ ಕಛೇರಿಯನ್ನು ಸಂಪರ್ಕಿಸುವುದು ಅಥವಾ ಮೊಬೈಲ್ ದೂರವಾಣಿ ಸಂಖ್ಯೆ: 7760990060, 7760990095 ಮತ್ತು 7760990011 ಗಳಿಗೆ ಸಂಪರ್ಕಿಸಿ ಮಾಹಿತಿಯನ್ನು ನೀಡಬಹುದಾಗಿರುತ್ತದೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ನೇಮಕಾತಿಗಳಿಗೆ ಸಂಬಂಧಿಸಿದ ಎಲ್ಲಾ ಮಾಹಿತಿಯನ್ನು ನಿಗಮದ ವೆಬ್‌ಸೈಟ್ WWW.Ksrtcjobs.com ನಲ್ಲಿ ಪ್ರಕಟಿಸಲಾಗುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಹವಾಮಾನ ಆಧಾರಿತ ಕೃಷಿ ಸಲಹೆಗಳು

ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ):

ಕರ್ನಾಟಕ ರಾಜ್ಯದ ದಕ್ಷಿಣ ಒಳನಾಡಿನ ಪ್ರದೇಶದಲ್ಲಿ ಮುಂದಿನ 2-3 ದಿನಗಲಲ್ಲಿ ಮೋಡಕವಿದ ವಾತಾವರಣ ಮತ್ತು ಹಗುರದಿಂದ ಸಾದಾರಣ ಮಳೆಯ ಮುನ್ಸೂಚನೆ ಇರುವುದರಿಂದ ಭತ್ತದ ಬೆಳೆ ಬೆಂಕಿರೋಗಕ್ಕೆ ತುತ್ತಾಗುವ ಸಾದ್ಯತೆ ಹೆಚ್ಚಾಗಿರುತ್ತದೆ. ಇದರ ಮುನ್ನೆಚ್ಚರಿಕೆ ಕ್ರಮವಾಗಿ ಟ್ರೈಸೈಕ್ಲೋಜೋಲ್ 0.6 ಗ್ರಾಂ / ಲೀ ನೀರಿನಲ್ಲಿ ಬೆರೆಸಿ ಸಿಂಪಡಿಸಿ ಮತ್ತು ಸಾರಜನಕವನ್ನು ಮೇಲು ಗೊಬ್ಬರವಾಗಿ ಕೊಡುವುದನ್ನು ಕೆಲ ದಿನಗಳ ಕಾಲ ಮುಂದೂಡುವುದು ಉತ್ತಮ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಶೀಘ್ರದಲ್ಲಿ ಅನ್‌ಲೈನ್ ಮೂಲಕ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ):

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಪ್ರಸಕ್ತ 2021-22ನೇ ಸಾಲಿನ ಯೋಜನೆಗಳ ಆನ್‌ಲೈನ್ ಅರ್ಜಿಗಳನ್ನು ಶೀಘ್ರದಲ್ಲಿ ಆಹ್ವಾನಿಸಲಾಗುವುದು. ಈ ಕುರಿತು ಈಗಾಗಲೇ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮುಖ್ಯ ಕಾರ್ಯದರ್ಶಿಗಳು ಮತ್ತು ನಿಗಮದ ಮುಖ್ಯ ನಿರ್ದೇಶಕರು ಹಾಗೂ ಅಧ್ಯಕ್ಷರ ಜೊತೆ ಈ ಬಗ್ಗೆ ಚರ್ಚಿಸಲಾಗಿದ್ದು, ಶೀಘ್ರದಲ್ಲಿಯೇ ಅರ್ಜಿ ಸ್ವೀಕೃತಿಯ ದಿನಾಂಕವನ್ನು ಪ್ರಕಟಿಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ):

**ದಿನಾಂಕ: 12.10.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 38 | ಉತ್ತಮ | CO |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 62 | ತೃಪ್ತಿಕರ | CO |
| 3 | ಕವಿಕ, ಮೈಸೂರುರಸ್ತೆ | 40 | ಉತ್ತಮ | PM10 & PM2.5 |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 39 | ಉತ್ತಮ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 70 | ತೃಪ್ತಿಕರ | CO |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 65 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 60 | ತೃಪ್ತಿಕರ | CO |
| **(12.10.2021 at 12.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 46 | ಉತ್ತಮ | $NO_2$ |
| 9 | ಪೀಣ್ಯ | 43 | ಉತ್ತಮ | CO |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| ಉತ್ತಮ (0–50) | ಕನಿಷ್ಠ ಪರಿಣಾಮ |
| ತೃಪ್ತಿಕರ (51–100) | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| ಸಾಧಾರಣ (101–200) | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| ಕಳಪೆ (201–300) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| ಅತಿ ಕಳಪೆ (301–400) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| ತೀವ್ರ (>401) | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 12.10.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 38 | Good | CO |
| 2 | Jayanagar 5th Block, Shalini ground | 62 | Satisfactory | CO |
| 3 | KAVIKA, Mysore Road | 40 | Good | PM10 & PM2.5 |
| 4 | Rajeev Gandhi Institute of Chest Disease, NIMHANS, Hombegowda Nagar | 39 | Good | CO |
| 5 | HSR Layout, near Central Silkboard | 70 | Satisfactory | CO |
| 6 | City Railway Station, Magestic, Bengaluru | 65 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 60 | Satisfactory | CO |
| **(12.10.2021 at 12.05 AM)** | | | | |
| 8 | BWSSB, Kadabesanahalli | 46 | Good | $NO_2$ |
| 9 | Peenya | 43 | Good | CO |
| 10 | BTM Layout | * | * | * |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older adults | Severe (>401) | Respiratory effects even on healthy people |